**ದಿನಾಂಕ 22-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆ - ಅರ್ಜಿದಾರ ಪರ ಶ್ರೀ. ಡಿ.ಎಸ್.ಬಿ. ವಕೀಲರಿಂದ-**

ನಾನು ಪ್ರಸ್ತುತ ಪ್ರಕರಣದ ಅರ್ಜಿದಾರರಿದ್ದು, ನನ್ನ ತಾಯಿಯ ಮರಣ ಪ್ರಮಾಣಪತ್ರ ಪಡೆಯುವ ಸಲುವಾಗಿ ಅರ್ಜಿಯನ್ನು ಸಲ್ಲಿಸಿರುತ್ತೇನೆ. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಂತಹ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇದ್ದು, ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ನಾನು ನನ್ನ ಅರ್ಜಿಯೊಂದಿಗೆ ಕೆಲವು ದಾಖಲಾತಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ನೋಡಿ ಗುರುತಿಸುತ್ತೇನೆ. ಸದ್ರಿ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನೆಯನ್ನಾಗಿ ಗುರುತಿಸಲಾಗಿದೆ.

ಅಲಭ್ಯ ಪ್ರಮಾಣಪತ್ರವನ್ನು ನಿ.ಪಿ.1 ಎಂದು, ಅರ್ಜಿದಾರರ ಆಧಾರ ಕಾರ್ಡಿನ ನೋಟರೀಕೃತ ಪ್ರತಿಯನ್ನು ನಿ.ಪಿ.2 ಎಂದು, ದಿಃ 14-02-2026ರ ಕನ್ನಡ ಜನಾಂತರಂಗ ಪತ್ರಿಕೆಯನ್ನು ನಿಪಿ.3 ಎಂದು, ಪತ್ರಿಕೆಯ ಸಂಬಂಧಪಟ್ಟ ಪ್ರಕಟಣೆಯ ಭಾಗವನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ತಹಶೀಲ್ದಾರ, ಕುಮಟಾರವರು ನೀಡಿದ ಪಂಚನಾಮೆಯ ದೃಢೀಕೃತ ಪತ್ರಿಯನ್ನು ನಿಪಿ.4 ಎಂದು ಗುರುತಿಸಲಾಯಿತು.

**ಪಾಟೀ ಸವಾಲು -ಎದುರುದಾರರು ಗೈರು ಹಾಜರ ಇದ್ದು, ತಕರಾರು ಸಲ್ಲಿಸದೇ ಇರುವುದದಿರಿಂದ ಪಾಟೀ ಸವಾಲಿಗೆ ಸಮಯ ನೀಡಲು ಯಾವುದೇ ಸಕಾರಣಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.**

**ಮರು ವಿಚಾರಣೆ-ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

Sd/-

ಪ್ರಭಾರ ಪ್ರ.ದ.ನ್ಯಾದಂ. ಕುಮಟಾ